# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ/ಆ-1/161/ಸು/2021

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಬೆಂಗಳೂರು-560 001, **ದಿನಾಂಕ:29.03.2021**

## ಸುತ್ತೋಲೆ

ವಿಷಯ: ನಿವೇದನೆ/ಮನವಿಗಳನ್ನು ಸಮುಚಿತ ಮಾರ್ಗದಲ್ಲಿ ಸಲ್ಲಿಸುವ ಕುರಿತು.

ಉಲ್ಲೇಖ: 1.ಸುತ್ತೋಲೆ ಸಂಖ್ಯೆ:ಕವಿಪ:ಆ-1:ಇತರೆ:2009/192, ದಿನಾಂಕ:23.03.2009.
2.ಸುತ್ತೋಲೆ ಸಂಖ್ಯೆ:ಕವಿಪ:ಆ-1:5:ಸು:2019, ದಿನಾಂಕ:01.01.2019.

******

ಉಲ್ಲೇಖಿತ ಸುತ್ತೋಲೆಗಳಲ್ಲಿ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳು ತಮ್ಮ ಸೇವಾ ವಿಷಯಗಳಿಗೆ ಸಂಬಂಧಿಸಿದಂತೆ ಮನವಿಗಳನ್ನು ಕಾರ್ಯದರ್ಶಿಯವರ ಗಮನಕ್ಕೆ ತರದೆ ಏಕಾಏಕಿ ನೇರವಾಗಿ ಸಭಾಪತಿಯವರಿಗೆ ವಿಳಾಸಿಸಿ ಸಲ್ಲಿಸುವುದು ಸಮಂಜಸವಲ್ಲವೆಂದು ತಿಳಿಸಲಾಗಿತ್ತು. ಆದಾಗ್ಯೂ ಸಹ ಸದರಿ ಪ್ರವೃತ್ತಿಯನ್ನು ಅಧಿಕಾರಿ/ನೌಕರರು ಮುಂದುವರೆಸಿರುವುದರ ಬಗ್ಗೆ ಮಾನ್ಯ ಸಭಾಪತಿಯವರು ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿರುತ್ತಾರೆ.

ಆದುದರಿಂದ ಇನ್ನು ಮುಂದೆ ಸೇವಾ ವಿಷಯಕ್ಕೆ ಸಂಬಂಧಿಸಿದ ಮನವಿಗಳನ್ನು ಕಾರ್ಯದರ್ಶಿಯವರಿಗೆ ನೇರವಾಗಿ ಸಲ್ಲಿಸಬೇಕೆಂದು ಸೂಚಿಸಲಾಗಿದೆ. ತಪ್ಪಿದ್ದಲ್ಲಿ, ನಿಯಮಾವಳಿಗಳ ರೀತ್ಯಾ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ಎಂದು ಈ ಮೂಲಕ ಸೂಚಿಸಲಾಗಿದೆ.

(ಎನ್.ಜಯಂತಿ)
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ಗೆ:

ಕರ್ನಾಟಕ ವಿಧಾನ ಪರಿಷತ್ತಿನ ಎಲ್ಲಾ ಅಧಿಕಾರಿ/ನೌಕರರುಗಳು (ಶಾಸಕರ ಭವನವು ಸೇರಿದಂತೆ)

**ಪ್ರತಿಗಳು:**

1) ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
2) ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರಿಗೆ, ಕವಿಪ.
3) ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರಿಗೆ, ಕವಿಪ.
4) ಸಿಸ್ಟಂ ಅನಾಲಿಸ್ಟ್, ಗಣಕ ಕೇಂದ್ರ, ಕವಿಪ.-**ಮುಂದಿನ ಅಗತ್ಯ ಕ್ರಮಕ್ಕಾಗಿ.**
5) ರಕ್ಷಾ ಕಡತಕ್ಕೆ/ಬಿಡಿ ಪ್ರತಿಗಳು.